ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಪ್ರಧಾನ ಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 4/1/2020

# ದೇಶದ ಅಭಿವೃದ್ಧಿಗೆ ಮೋದಿ 4 ಮಂತ್ರ

## ಆವಿಷ್ಕಾರ, ಪೇಟೆಂಟ್, ಉತ್ಪಾದನೆ, ಸಮೃದ್ಧಿ | ಭಾರತೀಯ ವಿಜ್ಞಾನ ಕಾಂಗ್ರೆಸ್‌ನಲ್ಲಿ ವ್ಯಾಖ್ಯಾನ
## ಸಂಶೋಧನೆಯಿಂದ ದೇಶದ ಅಭಿವೃದ್ಧಿ | ತಂತ್ರಜ್ಞಾನ, ತಾರ್ಕಿಕತೆಯಿಂದ ದೇಶದ ದಿಕ್ಕು ಬದಲು

4/1/20

• **ಕನ್ನಡಪ್ರಭ ವಾರ್ತೆ** ಬೆಂಗಳೂರು

'ಜಾಗತಿಕ ಮಟ್ಟದಲ್ಲಿ ದೇಶವನ್ನು ಮುಂಚೂಣಿಯತ್ತ ಕೊಂಡೊಯ್ಯಲು ಆವಿಷ್ಕಾರ, ಪೇಟೆಂಟ್, ಉತ್ಪಾದನೆ ಮತ್ತು ಸಮೃದ್ಧಿ ನಮ್ಮ ಮಂತ್ರವಾಗಿರಬೇಕು. ಈ ನಾಲ್ಕು ಹೆಜ್ಜೆಗಳು ರಾಷ್ಟ್ರದ ದಿಕ್ಕನ್ನು ಬದಲಿಸುವುದರ ಜತೆಗೆ ಅಭಿವೃದ್ಧಿಯ ವೇಗವನ್ನು ಹೆಚ್ಚಿಸುತ್ತವೆ' ಎಂದು ಪ್ರಧಾನಿ ನರೇಂದ್ರ ಮೋದಿ ವ್ಯಾಖ್ಯಾನಿಸಿದ್ದಾರೆ.

ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿಕೆವಿಕೆ)ದಲ್ಲಿ ಐದು ದಿನಗಳ ಕಾಲ ನಡೆಯುವ ಪ್ರತಿಷ್ಠಿತ 107ನೇ ಭಾರತೀಯ ವಿಜ್ಞಾನ ಕಾಂಗ್ರೆಸ್ ಸಮ್ಮೇಳನಕ್ಕೆ ಶುಕ್ರವಾರ ಚಾಲನೆ ನೀಡಿ ಅವರು ಮಾತನಾಡಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ವಿಜ್ಞಾನಿಗಳು ಹೊಸದಾಗಿ ಸಂಶೋಧನೆ ಮಾಡಬೇಕು. ಅದಕ್ಕೆ ಅಗತ್ಯ ಇರುವ ಪೇಟೆಂಟ್ ನಾವು ಮಾಡುತ್ತೇವೆ. ➘ 11



### ಡಿಸಿಎಂಗಳಿಗೆ ಆಹ್ವಾನ ನೀಡದೆ ಅಪಚಾರ
#### ರಂಗಪ್ಪ ಕ್ರಮ ವಿರುದ್ಧ ಆಕ್ರೋಶ

ಬೆಂಗಳೂರು: ವಿಜ್ಞಾನ, ತಂತ್ರಜ್ಞಾನ ಖಾತೆ ನಿರ್ವಹಿಸುವ ಡಿಸಿಎಂ ಡಾ|ಸಿ.ಎನ್.ಅಶ್ವತ್ಥನಾರಾಯಣ ಮತ್ತು ಕೃಷಿ ಖಾತೆ ನಿರ್ವಹಿಸುವ ಡಿಸಿಎಂ ಲಕ್ಷ್ಮಣ್ ಸವದಿ ಅವರಿಗೆ ಪ್ರತಿಷ್ಠಿತ ವಿಜ್ಞಾನ ಕಾಂಗ್ರೆಸ್ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದ ವೇದಿಕೆಯಲ್ಲಿ ಅವಕಾಶ ನೀಡದಿರುವ ಸಮ್ಮೇಳನಾಧ್ಯಕ್ಷ ಪ್ರೊ|ಕೆ.ಎಸ್.ರಂಗಪ್ಪ ಅವರ ಕ್ರಮ ತೀವ್ರ ಚರ್ಚೆಗೀಡಾಗಿದ್ದು, ಡಿಸಿಎಂಗಳ ಆಪ್ತರ ಆಕ್ರೋಶಕ್ಕೂ ಕಾರಣವಾಗಿದೆ. ವಿವರ ➘ 7